# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ಗುರುತಿನ ಪ್ರಶ್ನೆ

ದಿನಾಂಕ : 24-03-2021 ಪ್ರಶ್ನೆ ಸಂಖ್ಯೆ : 271 (1996)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 24-03-2021

ಉತ್ತರಿಸುವ ಸಚಿವರು: ಕಂದಾಯ ಸಚಿವರು

ವಿಷಯ : ಮಾರ್ಗಸೂಚಿ ದರಕ್ಕಿಂತ ಕಡಿಮೆ ದರಕ್ಕೆ ನೋಂದಣಿ ಕುರಿತು

(ಅ) 2013-2018ರ ಅವಧಿಯಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಅನುಮೋದಿಸಿದ ಬಡಾವಣೆಗಳಾದ ಮಾಗಡಿ ರಸ್ತೆಯ ಕಾವೇರಿಪುರ, ಮಾರುತಿ ನಗರ, ಮೀನಾಕ್ಷಿನಗರ, ರಂಗನಾಥಪುರ ಮತ್ತು ಸಣ್ಣಕ್ಕಿ ಬಯಲು ಪ್ರದೇಶಗಳ 337ಮಾರಾಟ ಪತ್ರಗಳ ನೋಂದಣಿಯಿಂದ 103.39 ಕೋಟಿ ಮೊತ್ತದಷ್ಟು ಮುದ್ರಾಂಕ ಶುಲ್ಕ ನಷ್ಟವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸರ್ಕಾರ ನಿಗಧಿ ಪಡಿಸಿದ ಮಾರ್ಗಸೂಚಿ ದರಕ್ಕಿಂತ ಕಡಿಮೆ ದರಕ್ಕೆ ನೋಂದಣಿ ಮಾಡಲು ಯಾವ ಅಧಿಕಾರಿ ಅನುಮತಿ ನೀಡುತ್ತಾರೆ; ಈ ರೀತಿಯಾಗಿ ಸರ್ಕಾರದ ಆದಾಯಕ್ಕೆ ಉದ್ದೇಶಪೂರ್ವಕವಾಗಿ ನಷ್ಟ ಉಂಟು ಮಾಡುವ ಉಪ ನೋಂದಣಾಧಿಕಾರಿಯನ್ನು ವಜಾ ಮಾಡದಿರಲು ಕಾರಣವೇನು ;

(ಇ) ಸರ್ಕಾರಕ್ಕೆ ಉದ್ದೇಶಪೂರ್ವಕವಾಗಿ ಆದಾಯ ನಷ್ಟ ಉಂಟು ಮಾಡುವ ಉಪ ನೋಂದಣಾಧಿಕಾರಿಗಳ ಮೇಲೆ ಸರ್ಕಾರಕ್ಕೆ ವಂಚನೆ, ಉದ್ದೇಶಪೂರ್ವಕ ಮೋಸ, ರಾಜದ್ರೋಹದ ಪ್ರಕರಣ ದಾಖಲು ಮಾಡಲು ಯಾವ ಕ್ರಮ ಕೈಗೊಳ್ಳಲಾಗಿದೆ?